**Akashvani : Bangalore**
**Regional Bulletin In Kannada**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**14.02.2025** **14.30 hrs**

**<><*<><>*><>**

ಮುಖ್ಯಾಂಶಗಳು

- **ಬೆಂಗಳೂರಿನ ಆರ್ಟ್ ಆಫ್ ಲಿವಿಂಗ್ ಅಂತಾರಾಷ್ಟ್ರೀಯ ಕೇಂದ್ರದಲ್ಲಿ ೧೦ನೇ ಅಂತಾರಾಷ್ಟ್ರೀಯ ಮಹಿಳಾ ಸಮ್ಮೇಳನ ಉದ್ಘಾಟಿಸಿದ ರಾಷ್ಟ್ರಪತಿ ದ್ರೌಪದಿ ಮುರ್ಮು**
- **ಕೋವಿಡ್ ಪ್ರಕರಣವನ್ನು ಸಿಐಡಿ ತನಿಖೆಗೆ ವಹಿಸಿದ ರಾಜ್ಯ ಸರ್ಕಾರ**
- **ಏರೋ ಇಂಡಿಯಾ ವೈಮಾನಿಕ ಪ್ರದರ್ಶನಕ್ಕೆ ಇಂದು ತೆರೆ**
- **ಬಿಬಿಎಂಪಿ ವ್ಯಾಪ್ತಿಯಲ್ಲಿ ಬೀದಿ ನಾಯಿಗಳಿಗೆ ಸಂಯುಕ್ತ ಲಸಿಕೆ - ಬಿಬಿಎಂಪಿ ಮುಖ್ಯ ಆಯುಕ್ತ**

**<><*<><>*><>**

ಬೆಂಗಳೂರಿನ ಆರ್ಟ್ ಆಫ್ ಲಿವಿಂಗ್ ಅಂತಾರಾಷ್ಟ್ರೀಯ ಕೇಂದ್ರದಲ್ಲಿ ಇಂದಿನಿಂದ ಎರಡು ದಿನಗಳ ಕಾಲ ನಡೆಯಲಿರುವ ೧೦ನೇ ಅಂತಾರಾಷ್ಟ್ರೀಯ ಮಹಿಳಾ ಸಮ್ಮೇಳನವನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಇಂದು ಉದ್ಘಾಟಿಸಿದರು. ಉದ್ಘಾಟನಾ ಸಮಾವೇಶವನ್ನುದ್ದೇಶಿಸಿ ಮಾತನಾಡಿದ ರಾಷ್ಟ್ರಪತಿ, ಅಂತಾರಾಷ್ಟ್ರೀಯ ಮಹಿಳಾ ಸಮ್ಮೇಳನಕ್ಕೆ ಜಗತ್ತಿನ ವಿವಿಧೆಡೆಯಿಂದ ಆಗಮಿಸಿರುವ ಮಹಿಳಾ ಸಾಧಕರನ್ನು ಕಂಡು ಹರ್ಷವಾಗಿದೆ ಎಂದರು. ನಾವು ಈಗ ತಂತ್ರಜ್ಞಾನ ಯುಗದಲ್ಲಿದ್ದೇವೆ. ವಿಜ್ಞಾನ ಮತ್ತು ತಂತ್ರಜ್ಞಾನವು ಮಾನವನ ಜೀವನವನ್ನು ಉತ್ತಮಗೊಳಿಸಿದೆ. ಜೊತೆಗೆ ಸ್ಪರ್ಧಾತ್ಮಕ ಯುಗದಲ್ಲಿ ಜೀವಿಸುತ್ತಿದ್ದೇವೆ. ಬೌಧಿಕ ಶಕ್ತಿಯ ಜೊತೆಗೆ ಮಾನವೀಯತೆ ಮತ್ತು ಸಹಾನುಭೂತಿ ಕೂಡ ಅಗತ್ಯ. ಈ ಸಂದರ್ಭದಲ್ಲಿ ಮಹಿಳೆಯ ಪಾತ್ರ ತುಂಬಾ ಮಹತ್ವದ್ದು ಎಂದು ಅವರು ಪ್ರತಿಪಾದಿಸಿದರು. ಮಹಿಳೆಯರು ತಮ್ಮ ಕುಟುಂಬದ ಪ್ರತಿಯೊಬ್ಬ ಸದಸ್ಯರ ಏಳಿಗೆಗಾಗಿ ಶ್ರಮಿಸುತ್ತಾರೆ. ಜೊತೆಗೆ ತಮ್ಮ ವೃತ್ತಿ ಜೀವನದಲ್ಲೂ ಉತ್ತಮ ಸಾಧನೆ ಮಾಡುತ್ತಿದ್ದಾರೆ. ಜಾಗತಿಕ ಏಳಿಗೆಗಾಗಿ ಮಹಿಳೆಯರ ಪಾತ್ರ ಅತ್ಯಮೂಲ್ಯವಾದುದು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು.

*****ಧ್ವನಿ*** ರಾಷ್ಟ್ರಪತಿ**

ಈ ವೇಳೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಕೇಂದ್ರ ಸಚಿವರಾದ ಅನ್ನಪೂರ್ಣ ದೇವಿ, ಶೋಭಾ ಕರಂದ್ಲಾಜೆ, ಮಾಜಿ ಸಚಿವೆ ಮೀನಾಕ್ಷಿ ಲೇಖಿ ಉಪಸ್ಥಿತರಿದ್ದರು. ಆರ್ಟ್ ಆಫ್ ಲಿವಿಂಗ್ ಆಯೋಜಿಸಿರುವ ಈ ಸಮ್ಮೇಳನದಲ್ಲಿ ಕಾಮನ್‌ವೆಲ್ತ್ ಪ್ರಧಾನ ಕಾರ್ಯದರ್ಶಿ ಪೆಟ್ರೀಷಿಯಾ ಸ್ಕಾಟ್ಲೆಂಡ್, ಜಪಾನ್‌ನ ಮಾಜಿ ಪ್ರಧಾನಿ ಶಿಂಜೊ ಅಬೆ ಅವರ ಪತ್ನಿ ಅಕಿ ಅಬೆ ಸೇರಿದಂತೆ ೧೧೫ ದೇಶಗಳ ರಾಜಕೀಯ, ಉದ್ಯಮ, ಕಲೆ ಮತ್ತು ಸಾಮಾಜಿಕ ವಲಯ ಸೇರಿದಂತೆ ವಿವಿಧ ಕ್ಷೇತ್ರಗಳ ೭ ಸಾವಿರಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಿದ್ದಾರೆ. ಅಲ್ಲದೆ ೭೦ಕ್ಕೂ ಹೆಚ್ಚು ಭಾಷಣಕಾರರು ಮತ್ತು ೫೦೦ಕ್ಕೂ ಹೆಚ್ಚು ಪ್ರತಿನಿಧಿಗಳು ಪಾಲ್ಗೊಂಡಿದ್ದಾರೆ.

**<><*<><>*><>**

ರಾಜ್ಯ ಸರ್ಕಾರ ಕೋವಿಡ್ ಪ್ರಕರಣದ ತನಿಖೆಯನ್ನು ಸಿಐಡಿಗೆ ಹಸ್ತಾಂತರಿಸಿದೆ. ಎಫ್‌ಐಆರ್ ದಾಖಲಿಸಿದ ಎರಡು ತಿಂಗಳ ನಂತರ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಈ ಕ್ರಮ ಕೈಗೊಂಡಿದೆ ಎಂದು ಐಎಎನ್‌ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ.  ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ನಡೆದಿದೆ ಎನ್ನಲಾದ ಕೋವಿಡ್ ಹಗರಣದ ತನಿಖೆಯನ್ನು ಸಿಐಡಿ ಎಸ್‌ಪಿ ರಾಘವೇಂದ್ರ ಹೆಗ್ಡೆ ನೇತೃತ್ವದ ತಂಡ ಮತ್ತು ಮೂವರು ಡಿವೈಎಸ್‌ಪಿಗಳು ನಡೆಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ. ಕೋವಿಡ್ ಹಗರಣಕ್ಕೆ ಸಂಬಂಧಿಸಿದಂತೆ ಹಿರಿಯ ಅಧಿಕಾರಿಗಳು ಮತ್ತು ಸಿಬ್ಬಂದಿ ವಿರುದ್ಧ ವಿಧಾನಸೌಧ ಪೊಲೀಸ್ ಠಾಣೆಯಲ್ಲಿ ಕಳೆದ ಡಿಸೆಂಬರ್ ೧೩ರಂದು ಎಫ್‌ಐಆರ್ ದಾಖಲಿಸಲಾಗಿದೆ. ಹೈಕೋರ್ಟ್ ನ್ಯಾಯಮೂರ್ತಿ ಜಾನ್ ಮೈಕೆಲ್ ಡಿ'ಕುನ್ಹಾ ನೇತೃತ್ವದ ಆಯೋಗದ ವರದಿಯನ್ನು ಪರಿಶೀಲಿಸಿ, ಶಿಫಾರಸುಗಳನ್ನು ನೀಡಲು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ವಿಶೇಷ ಸಂಪುಟ ಉಪಸಮಿತಿಯನ್ನು ರಾಜ್ಯ ಸರ್ಕಾರ ರಚಿಸಿತ್ತು. ಕೋವಿಡ್ ನಿರ್ವಹಣೆಗೆ ಸಂಬಂಧಿಸಿದ ಅಕ್ರಮಗಳ ಕುರಿತು ನ್ಯಾಯಮೂರ್ತಿ ಮೈಕೆಲ್ ಕುನ್ಹಾ ಅವರ ಸಮಿತಿಯ ಶಿಫಾರಸುಗಳ ಆಧಾರದ ಮೇಲೆ ಅಧಿಕಾರಿಗಳು ತನಿಖೆ ನಡೆಸುತ್ತಿದ್ದಾರೆ. ಕೋವಿಡ್ ಹಣವನ್ನು ದುರುಪಯೋಗಪಡಿಸಿಕೊಂಡವರನ್ನು ಬಿಡುವುದಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ.

<><*<><>*><>

ಕಳೆದ ೪ ದಿನಗಳಿಂದ ಬೆಂಗಳೂರಿನ ಯಲಹಂಕದ ವಾಯುನೆಲೆಯಲ್ಲಿ ನಡೆದ ಏರೋ ಇಂಡಿಯಾ ವೈಮಾನಿಕ ಪ್ರದರ್ಶನ ೨೦೨೫ಕ್ಕೆ ಇಂದು ತೆರೆ ಬೀಳಲಿದೆ. ವಾಣಿಜ್ಯ ವ್ಯವಹಾರಗಳಿಗೆ ಮೀಸಲಿಟ್ಟ ದಿನಗಳ ಬಳಿಕ, ಕೊನೆಯ ಎರಡು ದಿನ ಸಾರ್ವಜನಿಕ ವೀಕ್ಷಣೆಗೆ ಅವಕಾಶ ಕಲ್ಪಿಸಲಾಗಿರುವ ಹಿನ್ನೆಲೆಯಲ್ಲಿ, ಅಪಾರ ಸಂಖ್ಯೆಯಲ್ಲಿ ಜನರು ವೀಕ್ಷಣೆಗೆ ಆಗಮಿಸುತ್ತಿದ್ದಾರೆ. ವೈಮಾನಿಕ ಪ್ರದರ್ಶನದಲ್ಲಿ ಸೂರ್ಯಕಿರಣ, ಅಮೆರಿಕ ಎಫ್-೩೫, ರಷ್ಯಾದ ಎಸ್‌ಯು-೫೭, ತೇಜಸ್ ಹಾಗೂ ಹಗುರ ಯುದ್ಧ ಹೆಲಿಕಾಪ್ಟರ್‌ಗಳ ಪ್ರದರ್ಶನ ಮೈನವಿರೇಳಿಸಿದವು. ಇದೇ ವೇಳೆ ಸುಖೋಯ್ ಸೇರಿದಂತೆ ಹಲವು ಯುದ್ಧ ವಿಮಾನಗಳು ಬಾನಂಗಳದಲ್ಲಿ ಚಿತ್ತಾರ ಮೂಡಿಸಿದವು.

<><*<><>*><>

ರಾಜ್ಯದ ವಿಶ್ವವಿದ್ಯಾನಿಲಯಗಳ ಕಾರ್ಯವೈಖರಿ ಹಾಗೂ ಆರ್ಥಿಕ ಪರಿಸ್ಥಿತಿಗಳ ಅಧ್ಯಯನಕ್ಕೆ ಸಂಬಂಧಿಸಿದಂತೆ ರಚಿಸಲಾಗಿರುವ ಸಚಿವ ಸಂಪುಟ ಉಪ ಸಮಿತಿಯು ರಾಜ್ಯ, ವಿಶ್ವವಿದ್ಯಾಲಯ ಹಾಗೂ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ತೀರ್ಮಾನ ಕೈಗೊಳ್ಳಲಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದರು. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಹಿಂದೆ ನೂತನ ವಿಶ್ವವಿದ್ಯಾಲಯದ ಬಗ್ಗೆ ಮಾಡಿದ್ದ ಕಾನೂನಿನಲ್ಲಿ ಪ್ರತಿ ವಿವಿಗೆ ಕೇವಲ ೨ ಕೋಟಿ ರೂಪಾಯಿ ಮೀಸಲಿಟ್ಟಿದ್ದರು. ಯಾವುದೇ ಜಮೀನು ನೀಡಿರಲಿಲ್ಲ ಎಂದರು.  ಮಂಡ್ಯ, ಚಾಮರಾಜನಗರ ಭಾಗದಲ್ಲಿ ಎಲ್ಲರೂ ಮೈಸೂರು ವಿವಿಗೆ ಮೊದಲ ಆದ್ಯತೆ ನೀಡಿದ ಪರಿಣಾಮ ಇತರೇ ವಿವಿಗಳಲ್ಲಿ ಪ್ರವೇಶಾತಿ ಕುಸಿತವಾಗಿತ್ತು. ಈ ಬಗ್ಗೆ ಆಂತರಿಕ ವರದಿ ತಯಾರಿಸಿ ಮುಖ್ಯಮಂತ್ರಿಗಳಿಗೆ ಸಲ್ಲಿಸಲಾಗಿತ್ತು. ತಮ್ಮ ಅಧ್ಯಕ್ಷತೆಯಲ್ಲಿ ಸಂಪುಟ ಸಮಿತಿ ರಚಿಸಲಾಗಿತ್ತು. ಈ ಬಗ್ಗೆ ಮುಖ್ಯಮಂತ್ರಿಗಳಿಗೆ ಮಾಹಿತಿ ನೀಡಿದ ನಂತರ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಲಾಗುವುದು ಎಂದು ತಿಳಿಸಿದರು.

<><*<><>*><>

ದೇಶದಲ್ಲಿ ನವದೆಹಲಿ ಬಿಟ್ಟರೆ ಅತಿದೊಡ್ಡ ನಗರವಾಗಿ ಬೆಂಗಳೂರು ಗುರುತಿಸಿಕೊಂಡಿದೆ. ಇಂತಹ ನಗರಕ್ಕೆ ನೀರಿನ ಅವಶ್ಯಕತೆ ಇದೆ. ಮಂಡ್ಯ ಜಿಲ್ಲೆಯ ನೀರಾವರಿ ವಿಚಾರದಲ್ಲಿ ಸಮಗ್ರ ಆಧುನೀಕರಣ ಆದ ಬಳಿಕ, ನೀರು ಉಳಿಯುತ್ತದೆ. ಆ ನೀರನ್ನು ಬೆಂಗಳೂರು ನಗರಕ್ಕೆ ಸರಬರಾಜು ಮಾಡುವ ಬಗ್ಗೆ ಪ್ರಸ್ತಾಪ ಇದೆ ಎಂದು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ತಿಳಿಸಿದ್ದಾರೆ. ಮಂಡ್ಯ ಜಿಲ್ಲೆಯ ಕೆ.ಆರ್.ಎಸ್. ಅಣೆಕಟ್ಟೆಯಿಂದ ನಿತ್ಯ ೫೦೦ ಎಂ.ಎಲ್.ಡಿ ನೀರನ್ನು ರಾಜಧಾನಿ ಬೆಂಗಳೂರಿಗೆ ಸರಬರಾಜು ಮಾಡುವ ಕಾವೇರಿ ಆರನೇ ಹಂತದ ಯೋಜನೆಗೆ ಮಂಡ್ಯ ಜಿಲ್ಲೆಯ ಜನಪ್ರತಿನಿಧಿಗಳು ಹಾಗೂ ಜನರ ವಿರೋಧಕ್ಕೆ ಸಂಬಂಧಿಸಿದಂತೆ ಅವರು ಈ ರೀತಿ ಪ್ರತಿಕ್ರಿಯೆ ನೀಡಿದ್ದಾರೆ.  ಇದೇ ವೇಳೆ ಮಂಡ್ಯ ವಿಶ್ವವಿದ್ಯಾಲಯವನ್ನು ಮೈಸೂರು ವಿಶ್ವವಿದ್ಯಾಲಯದೊಂದಿಗೆ ವಿಲೀನ ಮಾಡಬೇಕೆಂಬ ಒತ್ತಡವಿದ್ದು, ಈ ಬಗ್ಗೆ ಸಂಪುಟ ಸಭೆಯಲ್ಲಿ ನಿರ್ಧಾರ ಕೈಗೊಳ್ಳಲಾಗುವುದು. ಜೊತೆಗೆ ಮಂಡ್ಯ ಕೃಷಿ ವಿಶ್ವವಿದ್ಯಾಲಯಕ್ಕೆ ಹಾಸನ ಸೇರಿದಂತೆ ಕೆಲ ಕೃಷಿ ಕಾಲೇಜುಗಳ ಸೇರ್ಪಡೆಗೆ ಆಯಾ ಜಿಲ್ಲೆಯ ವಿರೋಧವಿದೆ. ಆ ಸಮಸ್ಯೆಯನ್ನು ಬಗೆಹರಿಸಬೇಕಿದೆ ಎಂದು ಹೇಳಿದರು.

<><*<><>*><>

ಬಿಬಿಎಂಪಿ ವ್ಯಾಪ್ತಿಯಲ್ಲಿ ಒಂದು ಲಕ್ಷ ೮೪ ಸಾವಿರ ಬೀದಿ ನಾಯಿಗಳಿಗೆ ಸಂಯುಕ್ತ ಲಸಿಕೆ ಹಾಕುವ ಗುರಿ ಹೊಂದಲಾಗಿದೆ ಎಂದು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ತಿಳಿಸಿದ್ದಾರೆ. ಬಿಬಿಎಂಪಿ ವ್ಯಾಪ್ತಿಯಲ್ಲಿ ನಾಯಿಗಳಿಗೆ ಸಂಯುಕ್ತ ಲಸಿಕೆ ಹಾಕುವ ಕಾರ್ಯಕ್ರಮಕ್ಕೆ ಪಾಲಿಕೆ ಕೇಂದ್ರ ಆವರಣದಲ್ಲಿ ಚಾಲನೆ ನೀಡಿದ ಬಳಿಕ ಮಾತನಾಡಿದ ಅವರು, ಇಡೀ ದೇಶದಲ್ಲಿಯೇ ಮೊದಲ ಬಾರಿಗೆ ಪಾಲಿಕೆ ವತಿಯಿಂದ ಸಂಯುಕ್ತ ಲಸಿಕೆ ನೀಡಲಾಗುತ್ತಿದೆ. ವ್ಯಾಕ್ಸಿನ್ ಮತ್ತು ಕೋಲ್ಡ್ ಸ್ಟೋರೇಜ್‌ಗಾಗಿ ೪ ಕೋಟಿ ೯೮ ಲಕ್ಷ ರೂಪಾಯಿ ವ್ಯಯಿಸಲಾಗುತ್ತಿದೆ ಎಂದು ಮಾಹಿತಿ ನೀಡಿದರು.   ಮಾರಕ ರೋಗಗಳಿಂದ ಬೀದಿ ನಾಯಿಗಳನ್ನು ರಕ್ಷಿಸಲು ಹಾಗೂ ನಾಯಿಗಳಿಂದ ಮಾನವನಿಗೆ ಹರಡಬಹುದಾದ ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟಲು ಈ ಸಂಯುಕ್ತ ಲಸಿಕೆಯು ಅತ್ಯವಶ್ಯಕವಾಗಿರುತ್ತದೆ ಎಂದು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಹೇಳಿದರು.

**ಧ್ವನಿ:ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ( ೨೨ ಸೆಕೆಂಡ್)**

<><*<><>*><>

ಆಕಾಶವಾಣಿ ನಡೆದು ಬಂದ ರೀತಿ ಕುರಿತ ಬೆಂಗಳೂರು ಆಕಾಶವಾಣಿಯ ಹಿರಿಯ ಉದ್ಘೋಷಕಿ ಬಿ.ಕೆ. ಸುಮತಿ ಅವರು ಬರೆದಿರುವ 'ನುಡಿತೇರನೆಳೆದವರು - ಬಾನುಲಿ ಕಲಿಗಳು' ಪುಸ್ತಕದ ಲೋಕಾರ್ಪಣೆ ಕಾರ್ಯಕ್ರಮ ನಾಳೆ ಬೆಳಗ್ಗೆ ೧೦ ಗಂಟೆಗೆ ಬೆಂಗಳೂರಿನ ಕುಮಾರಕೃಪಾ ರಸ್ತೆಯ, ಗಾಂಧಿಭವನದಲ್ಲಿ ನಡೆಯಲಿದೆ.

<><*<><>*><>

ಕೇಂದ್ರ ರೈಲ್ವೆ, ವಾರ್ತಾ ಮತ್ತು ಪ್ರಸಾರ ಖಾತೆ ಹಾಗೂ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಖಾತೆ ಸಚಿವರಾದ ಅಶ್ವಿನಿ ವೈಷ್ಣವ್ ನಾಳೆ ಬೆಂಗಳೂರಿನ ವಲಯ ರೈಲ್ವೆ ವ್ಯವಸ್ಥಾಪಕ ಕಚೇರಿಯಲ್ಲಿ ರೈಲ್ವೆ ಯೋಜನೆಗಳ

ಪ್ರಗತಿ ಪರಿಶೀಲನೆ ನಡೆಸಲಿದ್ದಾರೆ. ಬಳಿಕ ನಗರದ ಖಾಸಗಿ ಹೋಟೆಲ್‌ನಲ್ಲಿ ಸಂಜೆ ನಡೆಯಲಿರುವ ಇಂಟಲೆಕ್ಚುಯಲ್ ಮೀಟ್ ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ.

**<><*<><>*><>**

ಕ್ರಿಯಾ ಯೋಜನೆಯಲ್ಲಿ ತೋಟಗಾರಿಕೆ, ರೇಷ್ಮೆ, ಮೀನು ಸಾಕಾಣಿಕೆಗೆ ಅನುಕೂಲವಾಗುವ ಹಾಗೂ ಮಣ್ಣು ಮತ್ತು ತೇವಾಂಶ ಸಂರಕ್ಷಣೆಗೆ ಅಗತ್ಯವಾದ ಕಾಮಗಾರಿಗಳನ್ನು ಸೇರಿಸಿ, ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವಂತೆ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಮಂಡ್ಯ ಜಿಲ್ಲಾ ಪಂಚಾಯಿತಿ ಸಿಇಒ ನಂದಿನಿ ಸೂಚಿಸಿದ್ದಾರೆ. ಮಂಡ್ಯ ಜಿಲ್ಲೆಯ ಕೆ.ಆರ್.ಪೇಟೆ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಪಿಡಿಒಗಳೊಂದಿಗೆ ಆಯೋಜಿಸಿದ್ದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ನರೇಗಾ ಯೋಜನೆಯ ಕಾಮಗಾರಿಗಳು ಸಾಮಾನ್ಯ ಜನರಿಗೂ ಲಭ್ಯವಾಗುವಂತೆ ಕ್ರಮ ವಹಿಸಿ, ಕರ ವಸೂಲಾತಿ, ಬೂದು ನೀರು ನಿರ್ವಹಣಾ ಕಾಮಗಾರಿಗಳ ಅನುಷ್ಠಾನ, ಮಾನವ ದಿನ ಸೃಜನೆ ಮತ್ತು ಕಾಮಗಾರಿ ಪೂರ್ಣ ಮುಂತಾದ ವಿಷಯಗಳ ಕುರಿತು ಪ್ರಗತಿ ಸಾಧಿಸುವಂತೆ ಪಿಡಿಒಗಳಿಗೆ ಸೂಚಿಸಿದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**